# ಲೋಕೋಪಯೋಗಿ ಇಲಾಖೆ



ಶ್ರೀ ನರೇಂದ್ರ ಮೋದಿ
ಸನ್ಮಾನ್ಯ ಪ್ರಧಾನ ಮಂತ್ರಿಗಳು

ಜನ ಸಾಮಾನ್ಯರಿಗೆ ತೊಂದರೆಯಾಗದಂತೆ ರಸ್ತೆ, ಸೇತುವೆ, ಹೆದ್ದಾರಿಗಳ ದುರಸ್ತಿ ಕಾರ್ಯಗಳನ್ನು ತುರ್ತಾಗಿ ಪೂರ್ಣಗೊಳಿಸುವ ಲೋಕೋಪಯೋಗಿ ಇಲಾಖೆಯ ಕಾರ್ಯ ಪ್ರಶಂಸನೀಯ. ಲೋಕೋಪಯೋಗಿ ಸಚಿವ ಸಿ.ಸಿ. ಪಾಟೀಲ ಅವರ ನೇತೃತ್ವದಲ್ಲಿ ಅಭಿವೃದ್ಧಿ ಪಥದತ್ತ ಸಾಗುತ್ತಿರುವ ಲೋಕೋಪಯೋಗಿ ಇಲಾಖೆಯ ಸಾಧನೆ, ಮುಂದಿನ ಅಭಿವೃದ್ಧಿ ಯೋಜನೆಗಳ ಕುರಿತ ಸಂಕ್ಷಿಪ್ತ ಮಾಹಿತಿ ಇಲ್ಲಿದೆ.



ಶ್ರೀ ಬಸವರಾಜ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು



# ಸುರಕ್ಷಿತ ಪ್ರಯಾಣಕ್ಕೆ ಹೆದ್ದಾರಿಗಳೇ ವರದಾನ

## ಸರ್ವೀಸ್ ರಸ್ತೆಗಳ ನಿರ್ಮಾಣ | ಅವೈಜ್ಞಾನಿಕ ರಸ್ತೆ ತಡೆಗಳ ನಿರ್ಮೂಲನ | ರಸ್ತೆಗಳ ಉನ್ನತೀಕರಣ

ರಸ್ತೆಗಳ ಉನ್ನತೀಕರಣ, ಬೃಹತ್-ಮಧ್ಯಮ ಸೇತುವೆಗಳು, ರಾಜ್ಯ-ರಾಷ್ಟ್ರ ಹೆದ್ದಾರಿ ರಸ್ತೆಗಳ ದುರಸ್ತಿಗೆ ಹೆಚ್ಚು ಒತ್ತು ಕೊಟ್ಟು ಶ್ರೀಸಾಮಾನ್ಯರ ಸಂಚಾರಕ್ಕೆ ಸಂಚಕಾರ ಬರದಂತೆ ಜಾಗೃತಿ ವಹಿಸುತ್ತಿರುವ ಲೋಕೋಪಯೋಗಿ ಇಲಾಖೆಯು ಇಡೀ ರಾಜ್ಯದಲ್ಲಿ ಸಂಪರ್ಕಕ್ರಾಂತಿ ಸೃಷ್ಟಿಸುವತ್ತ ಹೆಜ್ಜೆಯನ್ನಿಟ್ಟಿದೆ.

ಯಾವುದೇ ಕೈಗಾರಿಕೆ, ವ್ಯಾಪಾರ, ಕೃಷಿ ಚಟುವಟಿಕೆ ಸರಾಗವಾಗಿ ನಡೆಯಬೇಕು ಎಂದರೆ ಉತ್ತಮ ಗುಣಮಟ್ಟದ ರಸ್ತೆಗಳು ಅತ್ಯಗತ್ಯ. ಇದನ್ನು ಗಮನಿಸಿ ಲೋಕೋಪಯೋಗಿ ಇಲಾಖೆ ರಾಜ್ಯದ ಪ್ರತಿ ರಸ್ತೆಯನ್ನು ಉತ್ತಮ ರೀತಿಯಲ್ಲಿ ನಿರ್ಮಾಣ ಮಾಡುವ ಹಾಗೂ ನಿರ್ಮಿಸುವ ಅವಿರತ ಹೋರಾಟ ನಡೆಸಿದ್ದು, ಮಾನ್ಯ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಅವರು ಅಧಿಕಾರ ಸ್ವೀಕರಿಸಿದ ನಂತರ ಸಿ.ಸಿ.ಪಾಟೀಲರಿಗೆ ಲೋಕೋಪಯೋಗಿ ಇಲಾಖೆಯ ಸಚಿವರಾಗಿ ಅಧಿಕಾರ ನೀಡಲಾಗಿತ್ತು, ಈಗ ಕರ್ನಾಟಕದ ರಸ್ತೆಗಳು ಅಭಿವೃದ್ಧಿ ಪಥದತ್ತ ಸಾಗಿದೆ.

ಇದಲ್ಲದೆ ಜಿಲ್ಲೆಗಳಿಗೆ ಭೇಟಿ ನೀಡುತ್ತಿದ್ದು, ಆ ಸಮಯದಲ್ಲಿ ಪ್ರತಿ ಜಿಲ್ಲೆಯ / ವಿಭಾಗಗಳ ಪ್ರಗತಿ ಪರಿಶೀಲನೆ ಸಹ ನಡೆಸಲಾಗುತ್ತಿದೆ. ನಬಾರ್ಡ್ ಸಂಸ್ಥೆಯಿಂದ ಆರ್‌ಐಡಿಎಫ್-27 ರಡಿ 143.00 ಕೋಟಿ ರೂ. ಮೊತ್ತದಲ್ಲಿ 23 ಬೃಹತ್ ಮತ್ತು ಮಧ್ಯಮ ಸೇತುವೆಗಳಿಗೆ ಅನುಮೋದನೆ ಪಡೆಯಲಾಗಿದೆ.

### ಅವೈಜ್ಞಾನಿಕ ರಸ್ತೆ ತಡೆಗಳಿಗೆ ಮುಕ್ತಿ

ಸುಗಮ ಸಾರಿಗೆ ಸಂಚಾರಕ್ಕೆ ತೀವ್ರ ಸಮಸ್ಯೆಯಾಗುತ್ತಿದ್ದ 1071 ರಸ್ತೆ ತಡೆಗಳನ್ನು (ರೋಡ್ ಹಂಪ್ಸ್ ತೆರವು ಗೊಳಿಸಲಾಗಿದೆ.

ರಾಜ್ಯದ ಬಹುದಿನಗಳ ಬೇಡಿಕೆಯಾದ ಮತ್ತು ಮಹತ್ವಾಕಾಂಕ್ಷೆಯ ಶಿರಾಡಿ ಘಾಟ್ ಹೆದ್ದಾರಿ ಚತುಷ್ಪಥ ಯೋಜನೆಯನ್ನು ತ್ವರಿತವಾಗಿ ಕೈಗೊಳ್ಳಬೇಕೆಂದು ಮಾನ್ಯ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ಮಾಡಿದ ಮನವಿಗೆ ಕೇಂದ್ರ ಸರ್ಕಾರವು ಹಸಿರು ನಿಶಾನೆ ನೀಡಿ 1200ಕೋಟಿ ವೆಚ್ಚದ ಕಾಮಗಾರಿಗೆ ಅನುಮೋದನೆ ನೀಡಿದೆ. ಇದಕ್ಕಾಗಿ ನಾನು ಸನ್ಮಾನ್ಯ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಜೀ, ನಿತಿನ್ ಗಡ್ಕರಿ ಜೀ ಮತ್ತು ಈ ಬಗ್ಗೆ ಶ್ರಮಿಸಿದ ಮುಖ್ಯ ಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿ ರವರಿಗೆ ನಾನು ವಂದನೆಗಳನ್ನು ತಿಳಿಸುತ್ತೇನೆ.

• ಸಿ.ಸಿ. ಪಾಟೀಲ
ಸಚಿವರು, ಲೋಕೋಪಯೋಗಿ ಇಲಾಖೆ

### ಶಾಲೆ ಮತ್ತು ಅಂಗನವಾಡಿ ಕಟ್ಟಡಗಳ ನಿರ್ಮಾಣದಲ್ಲಿ ಹೊಸ ದಾಖಲೆ

ಶಿಕ್ಷಣ ಮತ್ತು ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಇಲಾಖೆಗಳ ಸಹಯೋಗದೊಂದಿಗೆ ರೂ. 756 ಕೋಟಿ ವೆಚ್ಚದಲ್ಲಿ 3423 ಪ್ರಾಥಮಿಕ ಹಾಗೂ ಪ್ರೌಢಶಾಲೆ ಕಟ್ಟಡ ನಿರ್ಮಿಸುವ ಗುರಿ ಈಗಾಗಲೇ ಸುಮಾರು 28114 ಕಾಮಗಾರಿಗಳು ಪೂರ್ಣ ರೂ. 137 ಕೋಟಿ ವೆಚ್ಚದಲ್ಲಿ ಒಟ್ಟು 842 ಸುಸಜ್ಜಿತ ಅಂಗನವಾಡಿ 585 ಕಾಮಗಾರಿಗಳು ಈಗಾಗಲೇ ಮುಕ್ತಾಯ.



ಕೇಂದ್ರ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವರಾದ ಶ್ರೀ ನಿತಿನ್ ಗಡ್ಕರಿ ಅವರಲ್ಲಿ ಸನ್ಮಾನ್ಯ ಶ್ರೀ ಬಸವರಾಜ ಬೊಮ್ಮಾಯಿ ಹಾಗೂ ಸಚಿವರಾದ ಶ್ರೀ ಸಿ.ಸಿ.ಪಾಟೀಲ ಅವರು ಕರ್ನಾಟಕ ಹೆದ್ದಾರಿ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಮಾಡಲಾದ ಮನವಿಗೆ ಸಕಾರಾತ್ಮಕ ಸ್ಪಂದನೆ.

## ರಸ್ತೆಗಳೆಂದರೆ ಭಾಗ್ಯದ ಬಾಗಿಲು : ಸಿ.ಸಿ.ಪಾಟೀಲ

ಒಂದರ್ಥದಲ್ಲಿ ರಸ್ತೆಗಳೆಂದರೆ ಅವು ಕೇವಲ ದಾರಿಗಳಲ್ಲ, ಅವು ಪ್ರಗತಿಯ ಪಥ. ಆದ್ದರಿಂದ ನಮ್ಮ ಸರ್ಕಾರವು ಲೋಕೋಪಯೋಗಿ ಇಲಾಖೆ ಮೂಲಕ ರಸ್ತೆ ಮತ್ತು ಹೆದ್ದಾರಿಗಳ ದುರಸ್ಥಿ, ವಿಸ್ತರಣೆ ಮತ್ತು ಪುನರ್ ನಿರ್ಮಾಣದ ಕೆಲಸಕ್ಕೆ ಆದ್ಯತೆ ನೀಡಿದೆ.

2021ರ ಸುಮಾರು 4 ತಿಂಗಳುಗಳ ಕಾಲ ರಾಜ್ಯದ ವಿವಿಧ ಕಡೆಗಳಲ್ಲಿ ಸುರಿದಭಾರಿ ಮಳೆಯಿಂದಾಗಿ ಅನೇಕ ರಸ್ತೆಗಳು ಮತ್ತು ಹೆದ್ದಾರಿಗಳು ಶಿಥಿಲಗೊಂಡಿವೆ. ಹಲವು ಸರ್ಕಾರಿ ಕಟ್ಟಡಗಳು ಹಾನಿಗೀಡಾಗಿವೆ.ಹೀಗಾಗಿ ಅವುಗಳ ದುರಸ್ಥಿ / ಪುನರ್ ನಿರ್ಮಾಣಕ್ಕೆ ಸನ್ಮಾನ್ಯ ಮುಖ್ಯಮಂತ್ರಿಯವರಾದ ಶ್ರೀ ಬಸವರಾಜ ಬೊಮ್ಮಾಯಿ ಅವರ ಮಾರ್ಗದರ್ಶನದಲ್ಲಿ ನಮ್ಮ ಇಲಾಖೆಯು ಸಮರೋಪಾದಿಯಲ್ಲಿ ಕ್ರಮ ಕೈಗೊಳ್ಳುತ್ತದೆ. ಅಷ್ಟೇ ಅಲ್ಲ ಇದರ ಜೊತೆಗೆ ಜನರ ಮತ್ತು ಜನಪ್ರತಿನಿಧಿಗಳ ಒತ್ತಾಸೆಯ ಮೇರೆಗೆ ಹಲವು ಹೊಸ ಕಾಮಗಾರಿಗಳನ್ನೂ ಕೈಗೆತ್ತಿಕೊಳ್ಳಲಾಗಿದೆ. ಈ ನಡುವೆ ಕೋವಿಡ್ ಸಂಕಷ್ಟದಿಂದಾಗಿ ರಾಜ್ಯದ ಹಣಕಾಸು ಪರಿಸ್ಥಿತಿಯ ಮೇಲೆ ತೀವ್ರ ಪೆಟ್ಟು ಬಿದ್ದರೂ ಸಹ ನಮ್ಮ ಗುರಿ ವಿಚಲಿತವಾಗಿಲ್ಲ.

ಮೂಲಭೂತ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಅನೇಕ ಸರ್ಕಾರಿ ಕಟ್ಟಡಗಳನ್ನು, ಶಾಲಾ-ಕಾಲೇಜು, ಅಂಗನವಾಡಿ ಕಟ್ಟಡಗಳನ್ನು, ನ್ಯಾಯಾಲಯಗಳ ಕಟ್ಟಡಗಳನ್ನು ನಿರ್ಮಿಸುವ ಜವಾಬ್ದಾರಿಯೂ ನಮ್ಮ ಲೋಕೋಪಯೋಗಿ ಇಲಾಖೆಯದ್ದಾಗಿದೆ. ನಮ್ಮ ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಯು 7589 ಕಿ.ಮೀ. ಗಳಷ್ಟಿದೆ. ರಾಜ್ಯ ಹೆದ್ದಾರಿಯು 27811 ಕಿ.ಮೀ. ಹಾಗೂ ಜಿಲ್ಲಾ ಮುಖ್ಯ ರಸ್ತೆಗಳು 56131 ಕಿ.ಮೀಗಳಷ್ಟಿವೆ. ಇವಲ್ಲದೇ ಸಾಕಷ್ಟು ಗ್ರಾಮೀಣ-ರಸ್ತೆಗಳಿಗೆ ನಿರ್ವಹಣೆ ಮಾಡುವ ಜವಾಬ್ದಾರಿ ನಮ್ಮ ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ್ದಾಗಿದೆ. ಅಷ್ಟೇ ಅಲ್ಲ ನಮ್ಮ ಹೆದ್ದಾರಿಗಳು ಸಕಲ ಸೌಲಭ್ಯಗಳೊಂದಿಗೆ ಅಂತರಾಷ್ಟ್ರೀಯ ಗುಣಮಟ್ಟವನ್ನು ಕಾಪಾಡಿಕೊಂಡು ಹೋಗಬೇಕೆಂಬ ನಿಟ್ಟಿನಲ್ಲಿ ಹಲವಾರು ಪೂರಕ ಕ್ರಮಗಳನ್ನು ಕೈಗೊಳ್ಳಲಾಗಿದೆ.



**ಉದಾಹರಣೆಗೆ -** ಸರ್ವೀಸ್ ರಸ್ತೆಗಳ ನಿರ್ಮಾಣ, ಅವೈಜ್ಞಾನಿಕ ರಸ್ತೆ ತಡೆಗಳ ನಿರ್ಮೂಲನ, ಸುರಕ್ಷತೆ ಮತ್ತು ಮಾರ್ಗದರ್ಶಿ ಫಲಕಗಳ ಅಳವಡಿಕೆ ಈ ಮುಂತಾದ ಹಲವು ಜನೋಪಯೋಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಒಟ್ಟಾರೆ ನಮ್ಮ ನೆಚ್ಚಿನ ಮಾಜಿ ಪ್ರಧಾನಿಗಳಾಗಿದ್ದ ಶ್ರೀ ಅಟಲ್ ಬಿಹಾರಿ ವಾಜಪೇಯಿ ಅವರು ಕನಸು ಕಂಡಂತೆ ಇಡೀ ದೇಶದ ನಾಲ್ಕು ದಿಕ್ಕುಗಳಿಗೂ ಉತ್ತಮ ಹೆದ್ದಾರಿ ಸಂಪರ್ಕ ಕಲ್ಪಿಸುವ ಕಾಯಕದಲ್ಲಿ ವೇಗವರ್ಧಕವಾಗಿ ನಮ್ಮ ಸರ್ಕಾರ ಮುಂದುವರಿಯುತ್ತಿದೆ. ಇದಕ್ಕೆ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವರಾದ ಶ್ರೀ ನಿತಿನ್ ಗಡ್ಕರಿಜೀ ಅವರ ಪ್ರೋತ್ಸಾಹವೂ ದೊರೆಯುತ್ತಿರುವುದು. ನಮ್ಮ ನಾಡಿಗೆ ವರದಾನವಾಗಿದೆ. ಇವೆಲ್ಲವುಗಳ ಫಲಶ್ರುತಿಯಾಗಿ ಉತ್ತಮ ಗುಣಮಟ್ಟದ ಹೆದ್ದಾರಿ ಮತ್ತು ಅಪಘಾತ ರಹಿತ ಸಂಚಾರ ವ್ಯವಸ್ಥೆ ಜನತೆಗೆ ಸಿಗುವಂತಾದರೆ ನಮ್ಮ ಪ್ರಯತ್ನ ಸಾರ್ಥಕ.

ಅತ್ಯುತ್ತಮ ರಸ್ತೆ ಜಾಲ ಆರ್ಥಿಕ ವ್ಯವಸ್ಥೆಯ ನರ-ನಾಡಿ ಇದ್ದಂತೆ ರಾಜ್ಯದ ಸರ್ವತೋಮುಖ ಅಭಿವೃದ್ಧಿಯಲ್ಲಿ ರಸ್ತೆ, ಹೆದ್ದಾರಿ, ಸಂಪರ್ಕ ಸೇತುವೆ, ಸರ್ಕಾರಿ ಕಟ್ಟಡಗಳು ಸೇರಿ ಸಂಪರ್ಕ ಕಲ್ಪಿಸುವ ಮೂಲ ಸೌಕರ್ಯಗಳ ಕೊಡುಗೆ ಅಪಾರವಾದದ್ದು.



ರಾಜ್ಯ ಅಷ್ಟ ದಿಕ್ಕುಗಳಲ್ಲಿಯೂ ಬೆಳೆಯಬೇಕು. ಅಭಿವೃದ್ಧಿ ಹೊಂದಬೇಕು ಅದಕ್ಕಾಗಿ ಸರಾಗ, ಸುಸೂತ್ರ ಮತ್ತು ಸುರಕ್ಷಿತವಾದ ಸಂಪರ್ಕ ಜಾಲವನ್ನು ನಿರ್ಮಿಸಲಾಗುತ್ತಿದೆ. ಈ ಗುರಿ ತಲುಪಲು ಅಗತ್ಯ ಪ್ರೋತ್ಸಾಹ ನಮ್ಮ ಸರ್ಕಾರದ ವತಿಯಿಂದ ನೀಡಲಾಗುತ್ತಿದೆ.
ಅತ್ಯುತ್ತಮ ರಸ್ತೆ ಜಾಲ ವ್ಯಾಪಾರ ವಹಿವಾಟು ಅಭಿವೃದ್ಧಿಗೆ ಪೂರಕವಾಗಿದೆ. ಇಂತಹ ಜನಸ್ನೇಹಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಲೋಕೋಪಯೋಗಿ ಇಲಾಖೆಗೆ ಅಗತ್ಯ ಅನುದಾನವನ್ನು ಆದ್ಯತೆ ಮೇರೆಗೆ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.
ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ನಿರ್ವಹಣೆ ಕೆಲಸಗಳು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ನಡೆಯಬೇಕು ಹೀಗಾಗಿ ಕೇಂದ್ರದ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರ ಸೂಕ್ತ ಮಾರ್ಗದರ್ಶನ ಮತ್ತು ಸಹಕಾರದಿಂದಾಗಿ ಗುಣಮಟ್ಟದ ಮತ್ತು ಆಧುನಿಕ ಸೌಲಭ್ಯ ರಾಷ್ಟ್ರೀಯ ಹೆದ್ದಾರಿಗಳನ್ನು ಒದಗಿಸುವುದು ನಮ್ಮಿಂದ ಸಾಧ್ಯವಾಗಿದೆ . ಸಿ.ಸಿ. ಪಾಟೀಲ ಅವರಂಥ ಹಿರಿಯ ಮತ್ತು ಅನುಭವಿ ಸಚಿವರು ಲೋಕೋಪಯೋಗಿ ಇಲಾಖೆಯ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಿದ್ದಾರೆ. ಅವರ ದೂರದೃಷ್ಟಿಯ ಯೋಜನೆಗಳಿಂದಾಗಿ ಇಲಾಖೆಗೆ ಮತ್ತಷ್ಟು ಬಲ ಬಂದಂತಾಗಿದೆ, ಒಟ್ಟಾರೆ ನಮ್ಮ ರಾಜ್ಯದ ಪ್ರಗತಿಯ ರಥ ನಾಗಲೋಟದಿಂದ ಸಾಗುವುದಕ್ಕೆ ನಮ್ಮ ರಸ್ತೆ ಹೆದ್ದಾರಿಗಳೇ ವರದಾನ.

• ಬಸವರಾಜ ಬೊಮ್ಮಾಯಿ
ಮುಖ್ಯಮಂತ್ರಿಗಳು

### ಮಹತ್ವದ ಎಸ್‌ಸಿಪಿ-ಟಿಎಸ್‌ಪಿ ಯೋಜನೆ

- ಲೋಕೋಪಯೋಗಿ ಇಲಾಖೆಯು ಪರಿಶಿಷ್ಟ ಜಾತಿ ಹಾಗೂ ಪ.ಪಂಗಡಗಳು ನೆಲೆಸಿರುವ ಕಾಲೋನಿಗಳ ಅಭಿವೃದ್ಧಿಗಾಗಿ ಅನೇಕ ಮಹತ್ವದ ಯೋಜನೆಗಳನ್ನು ರೂಪಿಸಿದೆ. ಅವುಗಳಲ್ಲಿ ಮುಖ್ಯವಾದದ್ದು ಎಸ್‌ಸಿಪಿ-ಟಿಎಸ್‌ಪಿ ಯೋಜನೆ. ಪ್ರಸ್ತುತ ಸಾಲಿನಲ್ಲಿ ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗಳಡಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರು ವಾಸಿಸುವ ಕಾಲೋನಿಗಳಲ್ಲಿ ಸಿಮೆಂಟ್ ಕಾಂಕ್ರೀಟ್ ರಸ್ತೆಗಳ ನಿರ್ಮಾಣವನ್ನು 985 ಕೋಟಿ ರೂ.ಮೊತ್ತದಲ್ಲಿ ಅನುಷ್ಠಾನಗೊಳಿಸಲು ಜನಸಂಖ್ಯೆಯ ಆಧಾರದ ಮೇಲೆ ನಿಯಮಾನುಸಾರ ಈಗಾಗಲೇ ಕ್ಷೇತ್ರಾವಾರು ಅನುದಾನ ಹಂಚಿಕೆ ಮಾಡಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

### ರಸ್ತೆ ಅಭಿವೃದ್ಧಿಗಾಗಿ ಎಸ್.ಡಿ.ಪಿ. ಯೋಜನೆ

- ಡಾ.ನಂಜುಂಡಪ್ಪ ವರದಿ ಆಧಾರಿತ ಅತೀ ಹಿಂದುಳಿದ / ಹಿಂದುಳಿದ ತಾಲ್ಲೂಕುಗಳಲ್ಲಿ ಎಸ್.ಡಿ.ಪಿ. ಯೋಜನೆಯಡಿ ರಸ್ತೆ ಅಭಿವೃದ್ಧಿ ಕೈಗೊಳ್ಳಲು 290.00 ಕೋಟಿ ರೂ.ಮೊತ್ತಕ್ಕೆ ಅನುದಾನ ಹಂಚಿಕೆ ಮಾಡಲಾಗಿದ್ದು, ಕ್ರಿಯಾ ಯೋಜನೆ ತಯಾರಿಕೆಯಲ್ಲಿದೆ. ಲೋಕೋಪಯೋಗಿ ಇಲಾಖೆಯ ರಸ್ತೆಗಳ ವಾರ್ಷಿಕ ನಿರ್ವಹಣೆ ಕಾಮಗಾರಿಗಳನ್ನು ರಾಜ್ಯಾದ್ಯಂತ ಕೈಗೊಳ್ಳಲಾಗಿದ್ದು, ರಸ್ತೆಗಳ ಗುಂಡಿ ಮುಚ್ಚುವ ಕಾರ್ಯವನ್ನು ಫೆಬ್ರವರಿ ಅಂತ್ಯಕ್ಕೆ ಪೂರ್ಣಗೊಳಿಸಲು ಸೂಚಿಸಿದೆ.

### ರಾಷ್ಟ್ರೀಯ ಹೆದ್ದಾರಿಗೆ ಆಧುನಿಕ ಸ್ಪರ್ಶ

- ನಮ್ಮ ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ನಿರ್ವಹಣೆ, ದುರಸ್ಥಿ, ಅಗತ್ಯವಿದ್ದಲ್ಲಿ ಸರ್ವಿಸ್ ರಸ್ತೆ ನಿರ್ಮಾಣ, ಈ ಮುಂತಾದ ಕೆಲಸ ಕಾರ್ಯಗಳಿಗೆ ಆದ್ಯತೆ. ಪ್ರಮುಖ 4 ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನು ಘೋಷಿಸಲು ಪ್ರಕ್ರಿಯೆಗಳು ನಡೆದಿವೆ.

### ಏಕರೂಪ ಎಸ್.ಆರ್. ದರ

- ರಾಜ್ಯವ್ಯಾಪಿ ವಿವಿಧ ಇಂಜಿನಿಯರಿಂಗ್ ಇಲಾಖೆಗಳ ಏಕರೂಪ ದರಪಟ್ಟಿಯನ್ನು ಲೋಕೋಪಯೋಗಿ ಇಲಾಖೆಯಡಿ ಜಾರಿಗೆ ತರಲಾಗುತ್ತಿದ್ದು, ಈ ಕಾರ್ಯವು ಅಂತಿಮ ಹಂತದಲ್ಲಿರುತ್ತದೆ. ಅತೀ ಶೀಘ್ರವಾಗಿ ಏಕರೂಪ ದರಪಟ್ಟಿಯನ್ನು ಜಾರಿಗೆ ತರಲಾಗುವುದು.

### ಗ್ರಾಮ ಬಂಧು ಸೇತು ಯೋಜನೆ

- ಕರಾವಳಿ, ಮಲೆನಾಡು, ಒಳನಾಡು ಭಾಗಗಳಲ್ಲಿ ಸೇತುವೆಗಳ ದುರಸ್ತಿ ಕಾರ್ಯಕ್ಕಾಗಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು 2021 ನೇ ಸಾಲಿನ ಆಯವ್ಯಯದಲ್ಲಿ ಗ್ರಾಮ ಬಂಧು ಕಾಲು ಸೇತುವೆಗಳ ನಿರ್ಮಾಣ ಯೋಜನೆಯನ್ನು ರೂಪಿಸಿದ್ದರು, 200 ಕೋಟಿ ರೂ. ಅನುದಾನದಡಿ ಕಾಮಗಾರಿಗಳು ಪ್ರಗತಿಯಲ್ಲಿವೆ.

### ನೂತನ ವಿಮಾನ ನಿಲ್ದಾಣಗಳ ನಿರ್ಮಾಣ

ರಾಜ್ಯದ ಪ್ರವಾಸಿ ತಾಣಗಳಿಗೆ ಮತ್ತು ವಾಣಿಜ್ಯ ಕೇಂದ್ರಗಳಿಗೆ ಸಂಪರ್ಕ ಕಲ್ಪಿಸಲು ಅನುಕೂಲವಾಗುವಂತೆ ಶಿವಮೊಗ್ಗ ಮತ್ತು ವಿಜಯಪುರಗಳಲ್ಲಿ ವಿಮಾನ ನಿಲ್ದಾಣಗಳ ನಿರ್ಮಾಣ.



### ಮಳೆ ಹಾನಿ : ರಸ್ತೆ ದುರಸ್ತಿ - ಗ್ರಾಮೀಣ ರಸ್ತೆ ಸಂಪರ್ಕಕ್ಕೂ ಕಾಯಕಲ್ಪ

2021 ಸಾಲಿನ ಆಗಸ್ಟ್, ಸೆಪ್ಟೆಂಬರ್, ಅಕ್ಟೋಬರ್ ಮತ್ತು ನವೆಂಬರ್‌ನಲ್ಲಿ ಸಂಭವಿಸಿದ ಅತಿವೃಷ್ಟಿಯಿಂದಾಗಿ ಹಾನಿಯಾದ ರಸ್ತೆಗಳ ಮತ್ತು ಸೇತುವೆ, ಕಟ್ಟಡಗಳ ದುರಸ್ತಿಗಾಗಿ ಒಟ್ಟು ರೂ. 610 ಕೋಟಿಗಳ ವೆಚ್ಚದಲ್ಲಿ ಹಲವಾರು ಕಾಮಗಾರಿಗಳು ಅನುಷ್ಠಾನಗೊಂಡಿವೆ.

### ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ

ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ (ಎಸ್‌ಹೆಚ್‌ಡಿಪಿ) ಹಂತ –4 ರಸ್ತೆ ಅಭಿವೃದ್ಧಿ ಕಾಮಗಾರಿ ಅನುಷ್ಠಾನಕ್ಕೆ 3500 ಕೋಟಿ ರೂ.ಮೊತ್ತದ ಪ್ರಸ್ತಾವನೆಗೆ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರು ವಿಶೇಷ ಆಸಕ್ತಿ ವಹಿಸಿ ಅನುಮೋದನೆ ನೀಡಿದ್ದು, ಸುಮಾರು 2,272 ಕಿ.ಮೀ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಅಭಿವೃದ್ಧಿ ಕೈಗೊಳ್ಳಲು ಕ್ರಮ ವಹಿಸಲಾಗಿದೆ.

### ಕೆ.ಆರ್.ಡಿ.ಸಿ.ಎಲ್ ಕಾಮಗಾರಿಗಳು

ಬೆಂಗಳೂರು ಸುತ್ತಮುತ್ತ ರೂ. 2095 ಕೋಟಿ ವೆಚ್ಚದಲ್ಲಿ 155 ಕಿ.ಮಿ. ರಸ್ತೆಗಳ ನಿರ್ಮಾಣ ಕಾಮಾಗರಿಗೆ ಚಾಲನೆ 42ಪ್ರಮುಖ ಸೇತುವೆಗಳ ಮತ್ತು 67 ಕಿರು ಸೇತುವೆಗಳ ಕಾಮಗಾರಿಗಳು ಪ್ರಗತಿಯಲ್ಲಿವೆ. ಸಿಂಧನೂರು-ಯರಮರಸ್ ನಡುವೆ ಮತ್ತು ಮುದಗಲ್ - ರಾಯಚೂರು ನಡುವೆ ಪಿಪಿಪಿ ಖಾಸಗಿ ಸಹಬಾಗಿತ್ವದಲಿ ಹೆದ್ದಾರಿ ನಿರ್ಮಿಸಲು ಅಗತ್ಯ ಕ್ರಮ.

### ಕೆಶಿಪ್‌ಯೋಜನೆ; ಪ್ರಗತಿಯಲ್ಲಿರುವ ಕಾಮಗಾರಿ:

ಸ್ಥಗಿತಗೊಂಡಿದ್ದ ಗದಗ-ಹೊನ್ನಾಳಿ ಹೆದ್ದಾರಿ ಅಭಿವೃದ್ಧಿಗೆ ಮತ್ತೆ ಚಾಲನೆ.

### ಪ್ರವಾಸಿ ಧಾಮಗಳಿಗೆ ಸಂಪರ್ಕ

ಮೈಸೂರು ಚಾಮುಂಡಿ ಬೆಟ್ಟ ಮತ್ತು ಬೆಂಗಳೂರಿನ ಹೊರ ವಲಯದಲ್ಲಿರುವ ನಂದಿ ಬೆಟ್ಟ ಪ್ರವಾಸಿಧಾಮಗಳಲ್ಲಿ ಭೂ ಕುಸಿತದಿಂದ ಹಾನಿಗೊಳಗಾದ ರಸ್ತೆ ಸಂಪರ್ಕಕ್ಕಾಗಿ ವಿಶೇಷ ಯೋಜನೆ, ಇವುಗಳಲ್ಲಿ ನಂದಿ ಬೆಟ್ಟದ ರಸ್ತೆ ನಿರ್ಮಾಣ ಯೋಜನೆ ಪೂರ್ಣಗೊಂಡಿದೆ.

### ಕರ್ನಾಟಕದ ರಸ್ತೆಗಳಿಗೆ ಬಿಹಾರ ಸಚಿವರ ಶ್ಲಾಘನೆ



ರಸ್ತೆಗಳ ಅಭಿವೃದ್ಧಿಗೆ ಸ್ಥಳೀಯ ಮಟ್ಟದಲ್ಲಿ ಮಾತ್ರವಲ್ಲದೇ, ರಾಷ್ಟ್ರೀಯ ಮಟ್ಟದಲ್ಲಿ ಯೂ ಭಾರಿ ಸುದ್ದಿಯಾಗುತ್ತಿದೆ. ವಿವಿಧ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿ ರುವ ಕರ್ನಾಟಕ ರಸ್ತೆ ನಿರ್ಮಾಣ ಹಂತದಲ್ಲಿ ಮಾದರಿಯಾಗಿ ನಿಂತಿದೆ ಬಿಹಾರ ಸರಕಾರವೂ ಪ್ರಶಂಸೆ ವ್ಯಕ್ತಪಡಿಸಿದೆ. ಕರ್ನಾಟಕವು ವಿವಿಧ ಕ್ಷೇತ್ರಗಳಲ್ಲಿ ಸಾಧಿಸಿರುವ ಅಭಿವೃದ್ಧಿಗೆ ಇಲ್ಲಿಯ ಸುಸಜ್ಜಿತ ಹೆದ್ದಾರಿಗಳು ಮತ್ತು ಹೆಚ್ಚಿನ ಮೂಲಸೌಲಭ್ಯಗಳು ಕಾರಣ ಎಂದು ಬಿಹಾರದ ರಸ್ತೆ ನಿರ್ಮಾಣ ಇಲಾಖೆಯ ಸಚಿವ ನಿತಿನ್ ನಬಿನ್ ಅವರು ಪ್ರಶಂಸಿಸಿದರು. ವಿಕಾಸಸೌಧದಲ್ಲಿ ಕೆಲ ತಿಂಗಳ ಹಿಂದೆ ಲೋಕೋಪಯೋಗಿ ಸಚಿವ ಸಿ.ಸಿ. ಪಾಟೀಲ ಅವರನ್ನು ಭೇಟಿಯಾಗಿ ಕರ್ನಾಟಕದಲ್ಲಿ ಕೈಗೊಳ್ಳುತ್ತಿರುವ ಹೆದ್ದಾರಿ ಮತ್ತು ರಸ್ತೆ ನಿರ್ಮಾಣಗಳ ಯೋಜನೆಗಳ ಬಗ್ಗೆ ಮಾಹಿತಿಗಳನ್ನು ಪಡೆದುಕೊಂಡ ಬಳಿಕ ಅವರು ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದರು.